ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 64(57)

**ಸದಸ್ಯರ ಹೆಸರು** : ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 12-09-2022

**ಉತ್ತರಿಸುವ ಸಚಿವರು** : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯ ಸರ್ಕಾರದ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಗಳ ಸ್ಥಿತಿಗತಿಗಳೇನು; ಎಷ್ಟು ಸರ್ಕಾರಿ ಕನ್ನಡ ಶಾಲೆಗಳಿವೆ; (ಜಿಲ್ಲಾವಾರು ವಿವರ ನೀಡುವುದು) | • 2019-20 ಹಾಗೂ 2020-21ನೇ ಸಾಲುಗಳಲ್ಲಿ 2400 ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆಗೆ ದ್ವಿಭಾಷಾ ಮಾದರಿಯಲ್ಲಿ (ಕನ್ನಡ-ಆಂಗ್ಲ ಮತ್ತು ಉರ್ದು-ಆಂಗ್ಲ) ತರಗತಿಗಳನ್ನು ಪ್ರಾರಂಭಿಸಲಾಗಿದೆ. ಸದರಿ ಶಾಲೆಗಳಲ್ಲಿ ತರಗತಿಗಳನ್ನು ನಿರ್ವಹಿಸಲು ಎಲ್ಲಾ ಶಿಕ್ಷಕರಿಗೆ EMTIP (English Medium Teachers Induction Programme) ತರಬೇತಿಯನ್ನು ಹಂತ ಹಂತವಾಗಿ (ತರಗತಿ 1,2,3) ನೀಡಲಾಗಿದೆ. ಈ ತರಗತಿಗಳಲ್ಲಿ ಸಮರ್ಪಕವಾಗಿ ಕಲಿಕೆಯನ್ನು ನಿರ್ವಹಿಸಲು ಶಿಕ್ಷಕರಿಗೆ ಕೈಪಿಡಿ, ಪಾಠೋಪಕರಣಗಳು ಹಾಗೂ ಮಾರ್ಗದರ್ಶನ ಸತತವಾಗಿ ನೀಡಲಾಗುತ್ತಿದೆ.<br>• 2021-22ನೇ ಸಾಲಿನಿಂದ 9 ಮತ್ತು 10ನೇ ತರಗತಿಯನ್ನು ಬೋಧಿಸುತ್ತಿರುವ 59105 ಪ್ರೌಢ ಶಾಲಾ ಶಿಕ್ಷಕರಿಗೆ DSERT ವತಿಯಿಂದ ಆನ್‌ಲೈನ್ ಮೂಲಕ ನಿಷ್ಠಾ 2.0 ತರಬೇತಿಯನ್ನು ನೀಡಲಾಗುತ್ತಿದೆ.<br>• 2021-22ನೇ ಸಾಲಿನಿಂದ 1 ರಿಂದ 5ನೇ ತರಗತಿಯನ್ನು ಬೋಧಿಸುತ್ತಿರುವ 65430 ಪ್ರಾಥಮಿಕ ಶಾಲಾ ಶಿಕ್ಷಕರಿಗೆ DSERT ವತಿಯಿಂದ ಆನ್‌ಲೈನ್ ಮೂಲಕ ನಿಷ್ಠಾ 3.0(ಮೂಲ ಭಾಷಾ ಹಾಗೂ ಸಂಖ್ಯಾ ಜ್ಞಾನ- FLN) ತರಬೇತಿಯನ್ನು ನೀಡಲಾಗುತ್ತಿದೆ.<br>• ವಿದ್ಯಾರ್ಥಿಗಳ ಕಲಿಕೆಗೆ ಅನುಕೂಲವಾಗುವಂತೆ ಪರ್ಯಾಯ |

| | | |
|---|---|---|
| | | ಶೈಕ್ಷಣಿಕ ಯೋಜನೆಯನ್ನು ಇಲಾಖೆಯಿಂದ ಶಿಕ್ಷಕರಿಗೆ ನೀಡಲಾಗಿದೆ.<br>• ಮಕ್ಕಳಿಗೆ ಓದುವ ಹವ್ಯಾಸವನ್ನು ಉತ್ತಮಪಡಿಸಲು ರಾಜ್ಯದ 9008 ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br>• ವಿದ್ಯಾರ್ಥಿಗಳಿಗೆ ಆನ್‌ಲೈನ್ ಬೋಧನೆಯನ್ನು ಕೈಗೊಳ್ಳಲಾಗಿದೆ.<br>• 2018–19ನೇ ಸಾಲಿನಿಂದ ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಆಯ್ದ ಪ್ರೌಢ ಶಾಲೆಗಳಿಗೆ 2681 ಗಣಿತ ಕಿಟ್‌ಗಳನ್ನು ಸರಬರಾಜು ಮಾಡಲಾಗಿದೆ.<br>• KPS ಶಾಲೆಗಳಲ್ಲಿನ ಮೂಲಭೂತ ಸೌಲಭ್ಯವೃದ್ಧಿಗಾಗಿ 2020–21ನೇ ಸಾಲಿನಲ್ಲಿ 50 ಶಾಲೆಗಳು ಮತ್ತು 2021–22ನೇ ಸಾಲಿಗೆ 50 ಶಾಲೆಗಳಿಗೆ ತಲಾ 2ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ. ಕಾಮಗಾರಿಗಳು ಪ್ರಗತಿಯಲ್ಲಿವೆ.<br>• ಟ್ಯಾಲ್ಪ್ ಯೋಜನೆಯಡಿ 4687 ಸರ್ಕಾರಿ ಪ್ರೌಢ ಶಾಲೆಗಳ ಪೈಕಿ 3218 ಸರ್ಕಾರಿ ಪ್ರೌಢ ಶಾಲೆಗಳಿಗೆ computers ಗಳು, ಎಲ್ಲಾ 4687ಸರ್ಕಾರಿ ಪ್ರೌಢ ಶಾಲೆಗಳಿಗೆ Laptops & Projectors ಗಳನ್ನು ಸರಬರಾಜು ಮಾಡಲಾಗಿದೆ.<br>• DSERT ವತಿಯಿಂದ ಟ್ಯಾಲ್ಪ್ ಯೋಜನೆಯಡಿ ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರಿಗೆ ಟ್ಯಾಲ್ಪ್ ತರಬೇತಿಯನ್ನು ನೀಡಲಾಗುತ್ತಿದೆ.<br>• ಪ್ರೌಢ ಶಾಲಾ ಹಂತದಲ್ಲಿಯೂ ಶಿಕ್ಷಕರ ಅಗತ್ಯತೆ ಆಧರಿಸಿ ತರಬೇತಿ ನೀಡುವುದರೊಂದಿಗೆ ತಂತ್ರಜ್ಞಾನ ಆಧಾರಿತ ಕೌಶಲಕ್ಕೆ ಒತ್ತು ನೀಡಲಾಗುತ್ತಿದೆ.<br><br>ರಾಜ್ಯದಲ್ಲಿ ಒಟ್ಟು 38273 ಕನ್ನಡ ಮಾಧ್ಯಮ ಶಾಲೆಗಳಿದ್ದು, ಸ್ಯಾಟ್ಸ್ ವಿಭಾಗದಿಂದ ನೀಡಿರುವ ಜಿಲ್ಲಾವಾರು ಶಾಲೆಗಳ ಸಂಖ್ಯೆಯ ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ. |
| ಆ. | ಕನ್ನಡ ಮಾಧ್ಯಮ ಶಾಲೆಗಳಿಗೆ ಕುಡಿಯುವ ನೀರು/ಶೌಚಾಲಯ ಹಾಗೂ ಇನ್ನಿತರ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆಯೇ; | ಕನ್ನಡ ಮಾಧ್ಯಮ ಬೋಧಿಸುವ ಸರ್ಕಾರಿ ಶಾಲೆಗಳನ್ನಲ್ಲದೆ, ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಿಗೆ ಅನ್ವಯವಾಗುವಂತೆ ಈ ಕೆಳಕಂಡ ಯೋಜನೆಗಳನ್ನು ಕುಡಿಯುವ ನೀರು ಮತ್ತು ಇನ್ನಿತರೆ ಶಾಲೆ ಸೌಲಭ್ಯ ಒದಗಿಸಲು ಕ್ರಮವಹಿಸಲಾಗಿದೆ.<br>• 2020–21ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ, ಆಟದ ಮೈದಾನ, ಆವರಣ ಗೋಡೆ, ಅಡುಗೆ ಕೋಣೆ, ಮಳೆ ನೀರು ಕೊಯ್ಲು ಯೋಜನೆ, ಪೌಷ್ಠಿಕ ತೋಟ ನಿರ್ಮಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ. 2920.99 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. |

| | | |
|---|---|---|
| | | • 2021-22ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ ಹಾಗೂ ದುರಸ್ತಿಗೆ 3500.00ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. 3500.00ಲಕ್ಷ ರೂಗಳ ಅನುದಾನ ಬಿಡುಗಡೆ ಮಾಡಲಾಗಿದೆ.<br>• 2021-22ನೇ ಸಾಲಿನಲ್ಲಿ ಅಮೃತ ಶಾಲಾ ಸೌಲಭ್ಯ ಯೋಜನೆ ಅಡಿಯಲ್ಲಿ ಆಯ್ದ 750 ಸರ್ಕಾರಿ ಶಾಲೆಗಳಿಗೆ ಸುಸಜ್ಜಿತ ಕಟ್ಟಡ. ಪ್ರಯೋಗಾಲಯ. ಗ್ರಂಥಾಲಯ, ಶೌಚಾಲಯ ಇತ್ಯಾದಿ ಸಮಗ್ರ ಸೌಲಭ್ಯ ಒದಗಿಸಲು ತಲಾ ರೂ.10.00 ಲಕ್ಷಗಳಂತೆ ಒಟ್ಟು ರೂ.75.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಸದರಿ ಯೋಜನೆಯಲ್ಲಿ ಶೌಚಾಲಯದ ಯೋಜನೆಯು ಒಳಗೊಂಡಿದೆ.<br>• **2018-19 ರಿಂದ 2022-23 ರ ಸಾಲಿನವರೆಗೆ ರಾಜ್ಯ ಮುಂದುವರಿದ ಕಾರ್ಯಕ್ರಮಗಳಡಿಯಲ್ಲಿ ಕುಡಿಯುವ ನೀರು ಶೌಚಾಲಯಗಳ ನಿರ್ವಹಣೆಗಾಗಿ ಪ್ರತಿ ಸರ್ಕಾರಿ ಶಾಲೆಗೆ ಅನುದಾನ ಬಿಡುಗಡೆ ಮಾಡಿರುವ ವಿವರ ಈ ಕೆಳಕಂಡಂತಿದೆ:** |

**2018-19:**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 3000/- | 636.75 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 4000/- | 899.48 |
| ಸರ್ಕಾರಿ ಪ್ರೌಢ ಶಾಲೆಗಳು | 4300/- | 201.28 |
| ಒಟ್ಟು | -- | **1737.51** |

**2019-20ನೇ ಸಾಲು**

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 4525/- | 950.65 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 5700/- | 1250.13 |
| ಸರ್ಕಾರಿ ಪ್ರೌಢ ಶಾಲೆಗಳು | 6370/- | 299.20 |
| ಒಟ್ಟು | -- | **2499.98** |

### 2020–21ನೇ ಸಾಲು

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 5400/– | 1122.93 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 6790/– | 1527.07 |
| ಸರ್ಕಾರಿ ಪ್ರೌಢ ಶಾಲೆಗಳು | 7400/– | 349.80 |
| **ಒಟ್ಟು** | -- | **2999.80** |

### 2021–22ನೇ ಸಾಲು

| ಶಾಲೆಗಳ ವಿವರ | ಘಟಕ ವೆಚ್ಚ (ರೂ.ಗಳಲ್ಲಿ) | ಅನುದಾನ ಬಿಡುಗಡೆ (ರೂ.ಲಕ್ಷಗಳಲ್ಲಿ) |
|---|---|---|
| ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 4650/– | 967.00 |
| ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 5400/– | 1214.00 |
| ಸರ್ಕಾರಿ ಪ್ರೌಢ ಶಾಲೆಗಳು | 6750/– | 319.00 |
| **ಒಟ್ಟು** | --- | **2500.00** |

### ಸಾಲು 2022–23

| ಕ್ರ ಸಂ | ಶಾಲೆಗಳ ವಿವರ | ಶಾಲೆಗಳ ಸಂಖ್ಯೆ | ತಲಾ ನಿರ್ವಹಣಾ ವೆಚ್ಚ ರೂಗಳಲ್ಲಿ | ನಿಗದಿಪಡಿಸಲಾದ ಅನುದಾನ(ರೂ ಲಕ್ಷಗಳಲ್ಲಿ) |
|---|---|---|---|---|
| 1 | ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು | 20747 | 6350 | 3500 |
| 2 | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು | 21906 | 8000 | |
| 3 | ಸರ್ಕಾರಿ ಪ್ರೌಢ ಶಾಲೆಗಳು | 4729 | 9000 | |
| | **ಒಟ್ಟು** | **47382** | --- | |

| | | |
|---|---|---|
| ಇ. | ಕನ್ನಡ ಮಾಧ್ಯಮ ಶಾಲೆಗಳ ಪ್ರವೇಶಾತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು) | 1. ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಪುಸ್ತಕ, ಸಮವಸ್ತ್ರ, ಶೂ. ಸಾಕ್ಸ್, ವರ್ಕ್ ಬುಕ್ ಮಧ್ಯಾಹ್ನದ ಉಪಹಾರ ಕ್ಷೀರಭಾಗ್ಯ ಉಚಿತವಾಗಿ ನೀಡಲಾಗುತ್ತದೆ.<br>2. ಶಾಲೆಗಳ ಮೂಲಭೂತ ಸೌಕರ್ಯ ಅಭಿವೃದ್ಧಿಪಡಿಸಲಾಗಿದೆ.<br>3. ಗುಣಾತ್ಮಕ ಶಿಕ್ಷಣಕ್ಕಾಗಿ ನಿಯಮಿತವಾಗಿ ಶಿಕ್ಷಕರಿಗೆ ತರಬೇತಿ ಆಯೋಜಿಸಲಾಗುತ್ತದೆ.<br>4. 6 ರಿಂದ 8ನೇ ತರಗತಿಯವರೆಗೆ ಗಣಿತ ಮತ್ತು ವಿಜ್ಞಾನ ವಿಷಯಕ್ಕೆ ಎನ್.ಸಿ.ಇ.ಆರ್.ಟಿ ಪಠ್ಯವಸ್ತುವಿನ ಪಠ್ಯಪುಸ್ತಕಗಳನ್ನು ಜಾರಿಗೊಳಿಸಲಾಗಿದೆ.<br>5. ಸರ್ಕಾರಿ ಶಾಲೆಗಳಲ್ಲಿ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಪ್ರೋತ್ಸಾಹಿಸಲಾಗುತ್ತಿದೆ.<br>6. 74 ಶೈಕ್ಷಣಿಕವಾಗಿ ಹಿಂದುಳಿದ ತಾಲ್ಲೂಕುಗಳಲ್ಲಿ 6 ರಿಂದ 10ನೇ ತರಗತಿಯವರೆಗೆ ಇಂಗ್ಲೀಷ್ ಮಾಧ್ಯಮದಲ್ಲಿ ಕೇಂದ್ರಿಯ ವಿದ್ಯಾಲಯ ಮಾದರಿಯಲ್ಲಿ ಆದರ್ಶ ವಿದ್ಯಾಲಯಗಳು(ಮಾದರಿ ಶಾಲೆಗಳು) ಪ್ರಾರಂಭಿಸಲಾಗಿದೆ.<br>7. ವಿಶೇಷ ಚೇತನ ಮಕ್ಕಳಿಗೆ ವೈದ್ಯಕೀಯ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ. ಮತ್ತು ನ್ಯೂನ್ಯತೆಗನುಗುಣವಾಗಿ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ.<br>8. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲು 86 ವಸತಿ ನಿಲಯಗಳನ್ನು ಪ್ರಾರಂಭಿಸಲಾಗಿದೆ. ಸದರಿ ವಸತಿ ನಿಲಯಗಳಲ್ಲಿ ಯೋಗ, ಕರಾಟೆ, ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>9. ಶಿಕ್ಷಣದಿಂದ ವಂಚಿತರಾದ ವಿದ್ಯಾರ್ಥಿಗಳನ್ನು ಗುರುತಿಸಿ, ಸಂಬಂಧಿಸಿದ ಪೋಷಕರು ಮತ್ತು ವಿದ್ಯಾರ್ಥಿಗಳನ್ನು ಮನವೊಲಿಸಿ, ಪುನ: ಶಾಲೆಗೆ ದಾಖಲಿಸಲಾಗುತ್ತಿದೆ. ಈ ಕಾರ್ಯವನ್ನು ಎಸ್‌ಡಿಎಮ್‌ಸಿ, ಸ್ಥಳೀಯ ಸಂಸ್ಥೆಗಳು ಹಾಗೂ ಸಮುದಾಯದ ಸಹಕಾರದೊಂದಿಗೆ ನಿರ್ವಹಿಸಲಾಗುತ್ತಿದೆ.<br>10. ಎಸ್.ಎ.ಟಿ.ಎಸ್ ವ್ಯವಸ್ಥೆ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಜಾಡುಹಿಡಿಯಲಾಗುತ್ತಿದೆ.<br>11. ಶಾಲಾ ದತ್ತು ಯೋಜನೆ (ಸಿ.ಎಸ್.ಆರ್) ಮೂಲಕ ಶಿಕ್ಷಣದ ಗುಣಮಟ್ಟವನ್ನು ಉತ್ತಮ ಪಡಿಸಲಾಗುತ್ತಿದೆ.<br>12. 6 ಮತ್ತು 8ನೇ ತರಗತಿಗೆ 1500 ಜಿ.ಪಿ.ಟಿ ಅತಿಥಿ ಶಿಕ್ಷಕರ ನೇಮಾಕಾತಿ ಮಾಡಿಕೊಳ್ಳಲು ಕ್ರಮವಹಿಸಲಾಗಿದೆ<br>13. 2021-22 & 2022-23 ರಲ್ಲಿ ಕಲಿಕಾಚೇತರಿಕೆ ಕಾರ್ಯಕ್ರಮವನ್ನು ಅನಷ್ಠಾನಗೊಳಿಸಿ ಶಿಕ್ಷಕರಿಗೆ ಕೋವಿಡ್ ಸಮಯದಲ್ಲಿ ತರಬೇತಿ ನೀಡಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಒತ್ತು ನೀಡಲಾಗಿದೆ. |

| | | |
|---|---|---|
| | | 14. ರಾಜ್ಯದ ಸರ್ಕಾರಿ & ಅನುದಾನಿತ ಶಾಲೆಗಳಿಂದ ಸಾಧನೆ ಮಾಡಿದ ಶಿಕ್ಷಕರುಗಳಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಮಾಡಿ ಸನ್ಮಾನಿಸಲಾಗುತ್ತಿದೆ. ಇದರಿಂದಾಗಿ ಶಿಕ್ಷಕರು ತಮ್ಮ ಬೋಧನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವುದರೊಂದಿಗೆ ಪರಿಣಾಮಕಾರಿ ಪಾಠ ಬೋಧನೆಗೆ ಶ್ರಮಿಸುವರು.<br>15. ಶತಮಾನ ಪೂರೈಸಿದ ಶಾಲೆಗಳನ್ನು ಪಾರಂಪರಿಕ ಶಾಲೆಗಳೆಂದು ಗುರ್ತಿಸಿ ಶಾಲಾ ನವೀಕರಣಕ್ಕಾಗಿ ಸರ್ಕಾರದಿಂದ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ<br>16. ಪ್ರತಿ ವರ್ಷ ರಾಜ್ಯದಲ್ಲಿ 8 ಉತ್ತಮ ಶಾಲೆಯನ್ನು ಗುರ್ತಿಸಿ ಸ್ವಾಭಿಮಾನಿ ಶಾಲೆಗಳಾಗಿ ಆಯ್ಕೆ ಮಾಡಿ ಸರ್ಕಾರದಿಂದ ಅನುದಾನವನ್ನು ನೀಡಲಾಗುತ್ತಿದೆ.<br>17. ರಾಜ್ಯದ ಎಲ್ಲಾ ಶಾಲೆಗಳಿಗೆ ಸಿ.ಆರ್.ಪಿ ಬಿ.ಆರ್.ಪಿ. ಬಿ.ಆರ್.ಸಿ ಡಯಟ್ ಉಪನ್ಯಾಸಕರು ವಿಷಯ ಪರಿವೀಕ್ಷಕರು ಹಾಗೂ ನೋಡಲ್ ಅಧಿಕಾರಿಗಳು ಪ್ರತಿ ಮಾಹೆ ಸದರಿ ಶಾಲೆಗಳ ಭೇಟಿ ನೀಡುವುದರೊಂದಿಗೆ ಅಗತ್ಯ ಸಲಹೆ, ಸೂಚನೆ, ಮಾರ್ಗದರ್ಶನ ನೀಡಿ ಅನುಪಾಲನೆ ಮಾಡಲು ಸೂಚಿಸಲಾಗಿರುತ್ತದೆ<br>18. ಪಿ.ಆರ್.ಡಿ.ಎಫ್ ಯೋಜನೆಯಡಿ ಗ್ರಾಮಸಭೆ ನಡೆಸುವ ಮೂಲಕ ಮಕ್ಕಳ ದಾಖಲಾತಿ ಆಂದೋಲನವನ್ನು ಹಮ್ಮಿಕೊಂಡು ಮಕ್ಕಳ ದಾಖಲಾತಿ ಹೆಚ್ಚಿಸಲು ಕ್ರಮವಹಿಸುವುದು.<br>19. ಎನ್.ಟಿ.ಎಸ್.ಇ /ಎನ್.ಎಂ.ಎಂ.ಎಸ್ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಡಿ.ಎಸ್.ಇ.ಆರ್.ಟಿ & ಎಂ.ಹೆಚ್. ಆರ್.ಡಿ ಮೂಲಕ ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.<br>20. ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ಪ್ರತಿ ಬ್ಲಾಕ್‌ನಲ್ಲಿ ನೋಡಲ್ ಅಧಿಕಾರಿಗಳ ನೇಮಿಸಿ ಪೋಷಕರ & ಮಕ್ಕಳ ಮನವೊಲಿಸಿ ಶಾಲೆಗೆ ಕರೆತರಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಇಪಿ 56 ಪಿಎಂಎ 2022**

**(ಬಿ.ಸಿ. ನಾಗೇಶ್)**

**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**

**ಸಕಾಲ ಸಚಿವರು**